

ಅಧ್ಯಯನ ಕೇಂದ್ರ ಹಾಗೂ ಗಾಂಧಿ ಪ್ರಚಾರ ಮತ್ತು ಗಾಂಧಿ ಭವನದ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ಗೌರಿಬಿದನೂರು ತಾಲ್ಲೂಕಿನ ಹೊಸೂರಿನ ಡಾ. ಹೆಚ್.ಎನ್. ಪ್ರೌಢಶಾಲೆಯ ಆವರಣದಲ್ಲಿ ವಿಜ್ಞಾನ ಪಾರ್ಕ್ ಹಾಗೂ ಡಾ. ಹೆಚ್. ನರಸಿಂಹಯ್ಯರವರ ಸಮಾಧಿ ಸ್ಥಳದ ಅಭಿವೃದ್ಧಿಗೆ ೧ ಕೋಟಿ ರೂ. ವೆಚ್ಚ ಮಾಡುತ್ತಿದೆ. ವಿದುರಾಶ್ವತ್ಥದಲ್ಲಿರುವ ಹುತಾತ್ಮ ಸ್ವಾತಂತ್ರ್ಯ ಯೋಧರ ಸ್ಮಾರಕ ಭವನವನ್ನು ೧ ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ. 'ಹಾವೇರಿಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ವಸ್ತು ಸಂಗ್ರಹಾಲಯವನ್ನು ಸ್ಥಾಪಿಸುತ್ತಿದೆ.

ಕಡಲ ತೀರದ ಭಾರ್ಗವ ಡಾ|| ಶಿವರಾಮ ಕಾರಂತ ಸ್ಮಾರಕವನ್ನು ನಿರ್ಮಿಸಲಾಗುತ್ತಿದೆ. ಫೀಲ್ಡ್ ಮಾರ್ಷಲ್ ಕಾರಿಯಪ್ಪ ಅವರ ಮಡಿಕೇರಿಯ ನಿವಾಸವನ್ನು ವಸ್ತು ಸಂಗ್ರಹಾಲಯವಾಗಿ ಅಭಿವೃದ್ಧಿ ಪಡಿಸಲಾಗುತ್ತಿದೆ. ಕನ್ನಡದ ಮೊದಲ ರಾಷ್ಟ್ರ ಕವಿ ಡಾ|| ಮಂಜೇಶ್ವರ ಗೋವಿಂದ ಪೈ ಅವರ ನಿವಾಸವನ್ನು ಪುನರುಜ್ಜೀವನಗೊಳಿಸುತ್ತಿದೆ. ಕವಿ ಶೈಲ ಮಾದರಿಯಲ್ಲಿ ಜಿ.ಎಸ್. ಶಿವರುದ್ರಪ್ಪ, ಮಾಸ್ತಿ ವೆಂಕಟೇಶ ಅಯ್ಯಂಗಾರ್, ದ.ರಾ. ಬೇಂದ್ರೆ ಇವರ ಜನ್ಮ ಸ್ಥಳ/ಮನೆಗಳನ್ನು ಅಭಿವೃದ್ಧಿ ಪಡಿಸುತ್ತಿದೆ.

ಕನ್ನಡ ಸಾಹಿತ್ಯ ಪರಿಷತ್ತು ೧೦೦ ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ೨೦೧೫೧೬ ಅನ್ನು ಕನ್ನಡ ವರ್ಷಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಇದಕ್ಕಾಗಿ ೧೦ ಕೋಟಿ ರೂ.ಗಳನ್ನು ನೀಡಿದೆ. ಗಡಿನಾಡ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ೨೦ ಕೋಟಿ ರೂ. ಬಿಡುಗಡೆ ಮಾಡಿದೆ. ಪ್ರಥಮವಾಗಿ ದೇವರ ದಾಸಿಮಯ್ಯ ಜಯಂತಿಯನ್ನು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಆಚರಿಸಲಾಗಿದೆ. ಮಂಡ್ಯ ಜಿಲ್ಲೆ ಸ್ಥಾಪನೆಯಾಗಿ ೭೫ ವರ್ಷಗಳು ತುಂಬಿದ ಹಿನ್ನೆಲೆಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಕಾರಣರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಸೇವೆಯನ್ನು ಸ್ಮರಿಸಲು ಅಮೃತ ಮಹೋತ್ಸವ ಕಾರ್ಯಕ್ರಮಕ್ಕೆ ೨ ಕೋಟಿ ರೂ. ನೀಡಿಕೆ. ರಾಜ್ಯದಲ್ಲಿನ ಕಷ್ಟ ಪರಿಸ್ಥಿತಿಯಲ್ಲಿರುವ ಸಾಹಿತಿ/ಕಲಾವಿದರುಗಳ ಮಾಸಾಶನವನ್ನು ೧,೫೦೦ ರೂ.ಗಳಿಗೆ ಹೆಚ್ಚಳ ಮಾಡಿದೆ.

## ಚಿತ್ರರಂಗಕ್ಕೆ ಪ್ರೋತ್ಸಾಹ

ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಇಮ್ಮಾವು ಬಳಿ ಸಾರ್ವಜನಿಕ ಸಹಭಾಗಿತ್ವದಲ್ಲಿ ಚಿತ್ರನಗರಿ ನಿರ್ಮಿಸಲು ೧೧೦ ಎಕರೆ ಜಮೀನನ್ನು ಮಂಜೂರು ಮಾಡಲಾಗಿದೆ. ಕಂಠೀರವ ಸ್ಟುಡಿಯೋದಲ್ಲಿ ನಿರ್ಮಿಸಿರುವ ಡಾ: ರಾಜ್‌ಕುಮಾರ್ ಸ್ಮಾರಕವನ್ನು ಲೋಕಾರ್ಪಣೆಗೊಳಿಸಲಾಗಿದೆ. ಗುಣಾತ್ಮಕ ಚಲನಚಿತ್ರಗಳಿಗೆ ನೀಡುವ ಸಹಾಯಧನ ಸೌಲಭ್ಯವನ್ನು ೭೫ ಚಲನಚಿತ್ರಗಳಿಂದ ೧೦೦ಕ್ಕೆ ಏರಿಸಲಾಗಿದೆ. ಕನ್ನಡದ ಪ್ರಥಮ ವಾಕ್ ಚಲನಚಿತ್ರಕ್ಕೆ ೭೫ ವರ್ಷ ಪೂರೈಸಿದ ನೆನಪಿಗಾಗಿ ಬೆಂಗಳೂರಿನಲ್ಲಿ ನಿರ್ಮಿಸಲಾಗುತ್ತಿರುವ ಅಮೃತ ಮಹೋತ್ಸವ ಭವನದ ಕಾಮಗಾರಿಗಳು ಅಂತಿಮ ಹಂತದಲ್ಲಿವೆ.

ಕಳೆದ ಮೂರು ವರ್ಷಗಳಿಂದಲೂ ಯಶಸ್ವಿಯಾಗಿ ಬೆಂಗಳೂರು ಅಂತರ ರಾಷ್ಟ್ರೀಯ ಚಲನಚಿತ್ರೋತ್ಸವದ ಆಯೋಜನೆ. ಪ್ರಪ್ರಥಮ ಬಾರಿಗೆ ಸರ್ಕಾರದಿಂದ ಅಂತರ ರಾಷ್ಟ್ರೀಯ ಮಕ್ಕಳ ಚಲನಚಿತ್ರೋತ್ಸವ ಆಯೋಜನೆ. ಕನ್ನಡ ಚಲನಚಿತ್ರ ಸಂಗೀತದ ಮಾಧುರ್ಯವನ್ನು ಜನಪ್ರಿಯಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 'ಗಾನಯಾನ' ಕಾರ್ಯಕ್ರಮದ ಸಂಘಟನೆ. 'ನೆಲದ ಸಿರಿ' ಸರಣಿ ಕಿರುಚಿತ್ರ ಮಾಲಿಕೆಯಲ್ಲಿ ವಿವಿಧ ರಂಗಗಳಲ್ಲಿ ಸಾಧನೆಗೈದ ವ್ಯಕ್ತಿಗಳ ಕುರಿತು ೧೫ ನಿಮಿಷಗಳ ಕಿರುಚಿತ್ರಗಳನ್ನು ನಿರ್ಮಿಸಿ ವಿವಿಧ ವಾಹಿನಿಗಳ ಮೂಲಕ ಪ್ರಸಾರ ಮಾಡಿದೆ.